## ಅಧ್ಯಕ್ಷರು ಆಯ್ಕೆ ಮತ್ತು ನೇರ ನೇಮಕಾತಿ ಪ್ರಾಧಿಕಾರ ಹಾಗೂ ಜಿಲ್ಲಾಧಿಕಾರಿಗಳು, ಬೆಳಗಾವಿ ಜಿಲ್ಲೆ, ಬೆಳಗಾವಿ

**: ಅಧಿಸೂಚನೆ :**

**ಅಧಿಸೂಚನೆ ಸಂಖ್ಯೆ ಕಂಶಾ/ಸಿಬ್ಬಂದಿ-3/ವಿವ-149/2017-18** **ದಿನಾಂಕ : /07/2018**

ವಿಷಯ : ಬೆಳಗಾವಿ ಜಿಲ್ಲಾ ಕಂದಾಯ ಇಲಾಖೆಯಲ್ಲಿ ಖಾಲಿ ಇರುವ ಗ್ರಾಮ ಲೆಕ್ಕಾಧಿಕಾರಿ ಹುದ್ದೆಗಳ ನೇರ ನೇಮಕಾತಿ ಕುರಿತು.

ಉಲ್ಲೇಖ : 1) ಸರ್ಕಾರದ ಅಧಿಸೂಚನೆ ಸಂಖ್ಯೆ : ಕಂಇ 299 ಬಿಎಸ್‌ಸಿ/2006 ದಿನಾಂಕ :03-2-2009
2) ಸರ್ಕಾರದ ಅಧಿಸೂಚನೆ ಸಂಖ್ಯೆ ಕಂಇ 299 ಬಿಎಸ್‌ಸಿ/2006 ದಿನಾಂಕ : 24-7-2009
3) ಸರಕಾರದ ಪತ್ರ ಸಂ/ಕಂಇ/04/ಬಿಎಸ್‌ಸಿ/2011 ದಿನಾಂಕ : 25-02-2011
4) ಪ್ರಾದೇಶಿಕ ಆಯುಕ್ತರು ಬೆಳಗಾವಿ ಇವರ ಪತ್ರ ನಂ:ಪ್ರಾಆಬೆ:ಸಿಬ್ಬಂದಿ-3(i):ವಿವ-96:2017-18 ದಿನಾಂಕ : 16-03-2018
5) ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977
6) ಸರ್ಕಾರದ ಆದೇಶ ಕ್ರ:ಆಇ/34/ಪಿಇಎನ್/2018 ದಿನಾಂಕ : 23-06-2018

*******

ಬೆಳಗಾವಿ ಜಿಲ್ಲಾ ಕಂದಾಯ ಘಟಕದಲ್ಲಿ ಬರುವ ತಾಲೂಕುಗಳಲ್ಲಿ ವಯೋನಿವೃತ್ತಿ,ರಾಜೀನಾಮೆ, ಮುಂಬಡ್ತಿ ಹಾಗೂ ಇನ್ನಿತರೆ ಕಾರಣಗಳಿಂದಾಗಿ ಖಾಲಿ ಇರುವ ಗ್ರಾಮ ಲೆಕ್ಕಿಗರ ಹುದ್ದೆಗಳನ್ನು ಕರ್ನಾಟಕ ನಾಗರೀಕ ಸೇವೆಗಳು (Revenue Subordinate Branch) ವೃಂದ ಮತ್ತು ನೇಮಕಾತಿ ನಿಯಮಗಳು 2008 ಮತ್ತು 2009 ರನ್ವಯ ಹಾಗೂ ಉಲ್ಲೇಖಿತ ಸರ್ಕಾರದ ಅಧಿಸೂಚನೆಗಳ ಪ್ರಕಾರ ರೋಸ್ಟರ ಕಮ್ ಮೇರಿಟ್ ಆಧಾರದ ಮೇಲೆ ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ On line ಮುಖಾಂತರ ಅರ್ಜಿಗಳನ್ನು ಅಹ್ವಾನಿಸಲಾಗಿದೆ. ಅರ್ಜಿ ನಮೂನೆಗಳನ್ನು ಇಲಾಖೆಯ ಅಧಿಕೃತ ವೆಬ್ ಸೈಟ್ ವಿಳಾಸ http://belagavi-va.kar.nic.in ನಲ್ಲಿ ಅಳವಡಿಸಲಾಗಿದ್ದು ದಿನಾಂಕ : **27-07-2018** ರಿಂದ ಸದರಿ ವೆಬ್ ಸೈಟ್‌ನಲ್ಲಿ ಚಾಲನೆಯಲ್ಲಿರುತ್ತದೆ. ಅರ್ಜಿಗಳನ್ನು ಆನ್-ಲೈನ್ ಮುಖಾಂತರ ಮಾತ್ರ ದಿನಾಂಕ : **31-08-2018** ರೊಳಗಾಗಿ ಸಲ್ಲಿಸತಕ್ಕದ್ದು. ಖುದ್ದಾಗಿ ಅಥವಾ ಅಂಚೆ ಮೂಲಕ ಸಲ್ಲಿಸಲು ಅವಕಾಶವಿರುವುದಿಲ್ಲ.

| ಕ್ರ.ಸಂ | ಹುದ್ದೆಯ ಹೆಸರು | ಒಟ್ಟು ಹುದ್ದೆ | ವಿದ್ಯಾರ್ಹತೆ |
|---|---|---|---|
| 01 | ಗ್ರಾಮ ಲೆಕ್ಕಾಧಿಕಾರಿ | 41 | 1) ದ್ವಿತೀಯ ಪಿ.ಯು.ಸಿ ಅಥವಾ CBSE or ICSE ನಡೆಸುವ 12 ನೇ ತರಗತಿಯ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು. ಈ ವಿದ್ಯಾರ್ಹತೆಯನ್ನು ಈ ಅಧಿಸೂಚನೆಯ ದಿನಾಂಕಕ್ಕೆ ಮುಂಚಿತವಾಗಿ ಹೊಂದಿರಬೇಕು.<br>2) ಮೇಲ್ಕಂಡ ವಿದ್ಯಾರ್ಹತೆಯನ್ನು ಹೊರತುಪಡಿಸಿ ಇನ್ನಿತರ ಯಾವುದೇ ತತ್ಸಮಾನ ವಿದ್ಯಾರ್ಹತೆಗಳನ್ನು ಈ ಹುದ್ದೆಗೆ ಪರಿಗಣಿಸಲಾಗುವುದಿಲ್ಲ ಹಾಗೂ ಮುಕ್ತ ವಿಶ್ವ ವಿದ್ಯಾಲಯದಿಂದ ಪಡೆದ ವಿದ್ಯಾರ್ಹತೆಯನ್ನು ಪರಿಗಣಿಸಲಾಗುವುದಿಲ್ಲ.<br>3) ಕಂಪ್ಯೂಟರ್ ಜ್ಞಾನವುಳ್ಳವರಾಗಿರಬೇಕು. |

**ವೇತನ ಶ್ರೇಣಿ :** 21400-500-22400-550-24600-600-27000-650-29600-750-32600-850-36000-950-39800-1100-42000/-

**ರೋಸ್ಟರ್ ಬಿಂದುಗಳ ವಿವರ :**

| ಕ್ರ.ಸಂ | **2014–15 ಸಾಲಿನ ಹಿಂಬಾಕಿ ಹುದ್ದೆಗಳ ವಿವರ** | | | | | | | | | |
|---|---|---|---|---|---|---|---|---|---|---|
| | ಹುದ್ದೆಗಳು | ವರ್ಗೀಕರಣ | ಇತರೆ (ಸಾಮಾನ್ಯ) | ಮಹಿಳೆ | ಗ್ರಾಮೀಣ | ಮಾ.ಸೈ. | ಯೋಜನಾ ನಿರಾಶ್ರಿತರು | ಅಂಗವಿಕಲ | ಕ.ಮಾ.ಅ | ಒಟ್ಟು |
| 01 | 02 | ಪ.ಜಾ. | – | – | – | – | – | – | – | – |
| | | ಪ.ಪಂ | – | – | – | – | – | – | – | – |
| | | ಪ್ರ–1 | – | – | – | – | – | – | – | – |
| | | ಪ್ರ–2ಎ | – | – | 01 | – | – | – | – | **01** |
| | | ಪ್ರ–2ಬಿ | – | – | – | – | – | – | – | – |
| | | ಪ್ರ–3ಎ | – | – | – | – | – | – | – | – |
| | | ಪ್ರ–3ಬಿ | – | – | – | – | – | – | – | – |
| | | ಸಾಮಾನ್ಯ | – | – | – | – | – | – | – | – |
| | | **ಒಟ್ಟು** | **–** | **–** | **01** | **–** | **–** | **–** | **–** | **01** |
| | **2015–16 ನೇ ಸಾಲಿನ ಹಿಂಬಾಕಿ ಹುದ್ದೆಗಳ ವಿವರ** | | | | | | | | | |
| 02 | 25 | ವರ್ಗೀಕರಣ | ಇತರೆ (ಸಾಮಾನ್ಯ) | ಮಹಿಳೆ | ಗ್ರಾಮೀಣ | ಮಾ.ಸೈ. | ಯೋಜನಾ ನಿರಾಶ್ರಿತರು | ಅಂಗವಿಕಲ | ಕ.ಮಾ.ಅ | ಒಟ್ಟು |
| | | ಪ.ಜಾ | – | 01 | 01 | – | – | – | – | 02 |
| | | ಪ.ಪಂ | – | 01 | – | – | – | – | – | 01 |
| | | ಪ್ರ–1 | – | – | 01 | – | – | – | – | 01 |
| | | ಪ್ರ–2ಎ | 01 | 02 | 01 | – | 01 | – | – | 05 |
| | | ಪ್ರ–2ಬಿ | – | | – | – | – | – | – | – |
| | | ಪ್ರ–3ಎ | – | 01 | – | – | – | – | – | 01 |
| | | ಪ್ರ–3ಬಿ | – | – | – | – | – | – | – | – |
| | | ಸಾಮಾನ್ಯಅಭ್ಯರ್ಥಿ | 03 | 04 | 06 | – | – | 01 (H.I) | 01 | 15 |
| | | **ಒಟ್ಟು** | **04** | **09** | **09** | **–** | **01** | **01** | **01** | **25** |
| | **2017–18 ನೇ ಸಾಲಿನಲ್ಲಿ ಖಾಲಿಯಾಗಿರುವ ಹುದ್ದೆಗಳ ವಿವರ.** | | | | | | | | | |
| 03 | 28 | ವರ್ಗೀಕರಣ | ಇತರೆ (ಸಾಮಾನ್ಯ) | ಮಹಿಳೆ | ಗ್ರಾಮೀಣ | ಮಾ.ಸೈ. | ಯೋಜನಾ ನಿರಾಶ್ರಿತರು | ಅಂಗವಿಕಲ | ಕ.ಮಾ.ಅ | ಒಟ್ಟು |
| | | ಪ.ಜಾ | 01 | 01 | – | – | – | – | – | **02** |
| | | ಪ.ಪಂ | – | – | – | – | – | – | – | – |
| | | ಪ್ರ–1 | – | – | – | – | – | – | – | – |
| | | ಪ್ರ–2ಎ | 01 | 01 | 01 | – | – | – | – | **03** |
| | | ಪ್ರ–2ಬಿ | – | – | 01 | – | – | – | – | **01** |
| | | ಪ್ರ–3ಎ | 01 | – | – | – | – | – | – | **01** |
| | | ಪ್ರ–3ಬಿ | – | 01 | – | – | – | – | – | **01** |
| | | ಸಾಮಾನ್ಯಅಭ್ಯರ್ಥಿ | 01 | 02 | 02 | 01 | – | – | 01 | **07** |
| | | **ಒಟ್ಟು** | **04** | **05** | **04** | **01** | **–** | **–** | **01** | **15** |

ಅರ್ಜಿಯಲ್ಲಿ ಮೀಸಲಾತಿಗೆ ಸಂಬಂಧಿಸಿದ ಅಂಕಣದಲ್ಲಿ ಉಪಯೋಗಿಸಿದ ಪದಗಳ ಅರ್ಥವನ್ನು ಈ ಕೆಳಕಂಡಂತೆ ಅರ್ಥೈಸಿಕೊಳ್ಳಬೇಕು.

| | | | | |
|---|---|---|---|---|
| 1 | ಸಾ.ಅ. | ಸಾಮಾನ್ಯ ಅಭ್ಯರ್ಥಿ | G.M | General Merit |
| 2 | ಪ.ಜಾ. | ಪರಿಶಿಷ್ಟ ಜಾತಿ | S.C. | Scheduled Caste |
| 3 | ಪ.ಪಂ. | ಪರಿಶಿಷ್ಟ ಪಂಗಡ | S.T. | Scheduled Tribe |
| 4 | ಪ್ರ-1 | ಪ್ರವರ್ಗ-1 | Cat-1 | Category-1 |
| 5 | 2-ಎ | ಪ್ರವರ್ಗ-2-ಎ | 2-A | Category-2-A |
| 6 | 2-ಬಿ | ಪ್ರವರ್ಗ-2-ಬಿ | 2-B | Category-2-B |
| 7 | 3-ಎ | ಪ್ರವರ್ಗ-3-ಎ | 3-A | Category-3-A |
| 8 | 3-ಬಿ | ಪ್ರವರ್ಗ-3-ಬಿ | 3-B | Category-3-B |
| 9 | ಮಾ.ಸೈ | ಮಾಜಿ ಸೈನಿಕ | Ex-Mp | Ex Military Person |
| 10 | ಗ್ರಾಮೀಣ | ಗ್ರಾಮೀಣ ಅಭ್ಯರ್ಥಿ | Rural | Rural Candidate |
| 11 | ಕ.ಮಾ.ಅ. | ಕನ್ನಡ ಮಾಧ್ಯಮ ಅಭ್ಯರ್ಥಿ | KMS | Kannada Medium Student |
| 12 | ಯೋ.ಅ. | ಯೋಜನಾ ನಿರಾಶ್ರಿತ ಅಭ್ಯರ್ಥಿ | PDP | Project Displaced Person |
| 13 | ಅಂ.ವಿ. | ಅಂಗವಿಕಲ | PH | Physically Handicapped Person |

**<u>ಅರ್ಜಿ ಶುಲ್ಕ :</u>**

ಸಾಮಾನ್ಯ/ಇತರೆ ಹಿಂದುಳಿದ ಅಭ್ಯರ್ಥಿಗಳಿಗೆ ರೂ.200-00

ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1 ಹಾಗೂ ಮಹಿಳೆಯರಿಗೆ ರೂ. 100-00

ಅರ್ಜಿ ಶುಲ್ಕವನ್ನು, **ವೆಬ್ ಸೈಟ್ ವಿಳಾಸ** http://belagavi-va.kar.nic.in ನಲ್ಲಿ ಲಭ್ಯವಾಗುವ ಚಲನ್ನಿನ ಮುದ್ರಿತ ಪ್ರತಿಯನ್ನು ತೆಗೆದುಕೊಂಡು ಖಾತೆ ನಂ.200300101013122 ನೇದ್ದಕ್ಕೆ ಯಾವುದಾದರೂ ಕಾರ್ಪೋರೇಷನ್ ಬ್ಯಾಂಕಿನಲ್ಲಿ ಪಾವತಿಸಿ, ಸ್ವೀಕೃತಿಯನ್ನು ಪಡೆಯಬೇಕು.

ಒಮ್ಮೆ ಅರ್ಜಿ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿಯೂ ಅರ್ಜಿದಾರರಿಗೆ ಹಿಂತಿರುಗಿಸಲಾಗುವುದಿಲ್ಲ ಹಾಗೂ ಮುಂದೆ ಯಾವ ನೇಮಕಾತಿಗೂ ಹೊಂದಾಣಿಕೆ ಮಾಡಲಾಗುವುದಿಲ್ಲ. ಅರ್ಜಿ ಶುಲ್ಕವನ್ನು ಸಂದಾಯ ಮಾಡದಿದ್ದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವದು.

| | |
|---|---|
| **ಅರ್ಜಿ ಸಲ್ಲಿಸಲು ಪ್ರಾರಂಭದ ದಿನಾಂಕ** | 27-07-2018 |
| **ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ** | 31-08-2018 |
| **ಚಲನ ಪಾವತಿಸಲು ಕೊನೆಯ ದಿನಾಂಕ** | 04-09-2018 |

**ಅಭ್ಯರ್ಥಿಗಳಿಗೆ ಸೂಚನೆ ಮತ್ತು ಷರತ್ತುಗಳು :**

1) ಆಯ್ಕೆಯನ್ನು ಅಭ್ಯರ್ಥಿಗಳ ಮೆರಿಟ್ ಹಾಗೂ ರೋಸ್ಟರ ಆಧಾರದ ಮೇಲೆ ಮಾತ್ರ ಪರಿಗಣಿಸಲಾಗುವದು.

2) ಅರ್ಜಿಗಳನ್ನು ಆನ್‌ಲೈನ್ ಮೂಲಕ ಮಾತ್ರ ಭರ್ತಿ ಮಾಡುವುದು. ಅಂಚೆ ಅಥವಾ ಕೋರಿಯರ್ ಅಥವಾ ಖುದ್ದಾಗಿ ಸ್ವೀಕರಿಸಲಾಗುವುದಿಲ್ಲ.

3) **ಹುದ್ದೆಗೆ ನಿಗದಿಪಡಿಸಿರುವ ವಯೋಮಿತಿ :**

ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಯು

ಅ) ಕನಿಷ್ಟ 18 ವರ್ಷ ವಯಸ್ಸನ್ನು ಪೂರ್ಣಗೊಂಡಿರತಕ್ಕದ್ದು, ಹಾಗೂ

ಆ) ಗರಿಷ್ಟ ವಯೋಮಿತಿಯನ್ನು ಮೀರಿರಬಾರದು.

| **ಅಭ್ಯರ್ಥಿಗಳು** | **ಗರಿಷ್ಠ ವಯೋಮಿತಿ** |
|---|---|
| ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳಿಗೆ | 35 ವರ್ಷ |
| ಪ್ರವರ್ಗ/ 2–ಎ, 2–ಬಿ, 3–ಎ, 3–ಬಿ ಹಾಗೂ<br>ಪ್ರವರ್ಗ–1 ಅಭ್ಯರ್ಥಿಗಳಿಗೆ | 38 ವರ್ಷ |
| ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ/ ಅಭ್ಯರ್ಥಿಗಳಿಗೆ | 40 ವರ್ಷ |

ಅಭ್ಯರ್ಥಿಗಳ ಜನ್ಮ ದಿನಾಂಕವನ್ನು ಅವರ ಎಸ್.ಎಸ್.ಎಲ್.ಸಿ. ಅಥವಾ ವರ್ಗಾವಣೆ ಪ್ರಮಾಣ ಪತ್ರ (T.C.) ಜನ್ಮ ದಿನಾಂಕವನ್ನು ತೋರಿಸುವ ಸಂಚಿತ ದಾಖಲೆಯ ಉದ್ಧೃತ ಭಾಗ ಕ್ಯೂಮುಲೇಟಿವ್ ರೆಕಾರ್ಡನಲ್ಲಿ ನಮೂದಿಸಿರುವಂತೆ ಪರಿಗಣಿಸಲಾಗುವುದು. ಇವುಗಳನ್ನು ಹೊರತುಪಡಿಸಿ ಇತರೆ ಯಾವುದೇ ದಾಖಲೆಗಳನ್ನು ಪರಿಗಣಿಸಲಾಗುವದಿಲ್ಲ.

**ಈ ಕೆಳಗಿನ ಸಂದರ್ಭಗಳಲ್ಲಿ ನೇಮಕಾತಿಯು ಗರಿಷ್ಠ ವಯೋಮಿತಿಯನ್ನು ಕೆಳಗೆ ತಿಳಿಸಿರುವಷ್ಟರ ಮಟ್ಟಿಗೆ ನಿಗಧಿಪಡಿಸಿದೆ.**

1) ಅಭ್ಯರ್ಥಿಯು ಮಾಜಿ ಸೈನಿಕನಾಗಿದ್ದಲ್ಲಿ ಅವನು/ಅವಳು ಕೇಂದ್ರ ಸಶಸ್ತ್ರ ದಳದಲ್ಲಿ ಎಷ್ಟು ವರ್ಷ ಸೇವೆ ಸಲ್ಲಿಸಿರುವರೋ ಅಷ್ಟು ವರ್ಷಗಳಿಗೆ 03 ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳು.

2) ಅಭ್ಯರ್ಥಿಯು ಅಂಗವಿಕಲನಾಗಿದ್ದರೆ 10 ವರ್ಷಗಳು.

3) ಅಭ್ಯರ್ಥಿಯು ವಿಧವೆಯಾಗಿದ್ದ ಲ್ಲಿ 10 ವರ್ಷಗಳು.

4) ಅಭ್ಯರ್ಥಿಗಳಿಗೆ ಕನ್ನಡ ಭಾಷಾ ಜ್ಞಾನದ ಅವಶ್ಯಕತೆ ಕಡ್ಡಾಯವಾಗಿರುತ್ತದೆ ಹಾಗೂ ಅಭ್ಯರ್ಥಿಗಳು ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಕನ್ನಡ ಭಾಷೆಯನ್ನು ಮೊದಲನೆಯ ಅಥವಾ ದ್ವಿತೀಯ ಭಾಷೆಯನ್ನು ತೆಗೆದುಕೊಂಡು ಉತ್ತೀರ್ಣರಾಗಿರಬೇಕು.

5) ಕರ್ನಾಟಕ ನಾಗರೀಕ ಸೇವೆ (ಕಂಪ್ಯೂಟರ ಲಿಟರೆಸಿ ಟೆಸ್ಟ್) ನಿಯಮಗಳು 2012 ರ ನಿಯಮ 2 ರಲ್ಲಿ ನಿಗದಿಪಡಿಸಿರುವಂತೆ ಹುದ್ದೆಗೆ ಆಯ್ಕೆಗೊಂಡ ಅಭ್ಯರ್ಥಿಯು ಸರ್ಕಾರದವರು ನಡೆಸಲಾದ ಅಥವಾ ಸರ್ಕಾರದ ಅನುಮೋದಿತ ಏಜನ್ಸಿಯವರು ತೆಗೆದುಕೊಳ್ಳಲಾದ ಕಂಪ್ಯೂಟರ ಲಿಟರೆಸಿ ಟೆಸ್ಟನಲ್ಲಿ ಪ್ರತಿಶತ 50% ಕ್ಕಿಂತ ಕಡಿಮೆ ಇಲ್ಲದಷ್ಟು ಅಂಕ ಪಡೆದು ಪಾಸಾದ ಬಗ್ಗೆ ಪ್ರಮಾಣ ಪತ್ರವನ್ನು ಅಭ್ಯರ್ಥಿಯು ಹುದ್ದೆಗೆ ಆಯ್ಕೆಗೊಂಡು ಸೇವೆಗೆ ಹಾಜರಾದ ದಿನಾಂಕದಿಂದ ಎರಡು ವರ್ಷಗಳ ಅರ್ಹತಾ ಅವಧಿಯೊಳಗೆ ಹಾಜರಪಡಿಸುವುದು.

6) ನಿಗದಿತ ದಿನಾಂಕದ ನಂತರ ಹಾಕಿದ ಅರ್ಜಿಯನ್ನು ಪರಿಗಣಿಸಲಾಗುವುದಿಲ್ಲ.

7) ಸರ್ಕಾರಿ ಇಲಾಖೆಯಲ್ಲಿ ಸೇವೆ ಸಲ್ಲಿಸುತ್ತಿರುವ ಅಭ್ಯರ್ಥಿಗಳು ಆನ್ ಲೈನ್ ನಲ್ಲಿ ಭರ್ತಿ ಮಾಡಿದ ಅರ್ಜಿ ಪ್ರತಿಯನ್ನು ನೇಮಕಾತಿ ಪ್ರಾಧಿಕಾರ/ಇಲಾಖಾ ಮುಖ್ಯಸ್ಥರ ಮುಖಾಂತರ ಸಲ್ಲಿಸುವುದು.

8) ಅಭ್ಯರ್ಥಿಗಳ ಆಯ್ಕೆ ಬಗ್ಗೆ ಪ್ರಚಾರ ಅಥವಾ ಶಿಫಾರಸ್ಸುಗಳನ್ನು ಮಾಡಿದರೆ ಅಂಥವರ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

9) ಅರ್ಜಿದಾರರೊಡನೆ ಪತ್ರ ವ್ಯವಹಾರಕ್ಕೆ ಅವಕಾಶವಿರುವುದಿಲ್ಲ.

10) ಜಾತಿ ಅಡಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳು ಜಾತಿ ಪ್ರಮಾಣ ಪತ್ರದ ಬಗ್ಗೆ ಜಿಲ್ಲಾಧಿಕಾರಿಗಳು (ಅಧ್ಯಕ್ಷರು ಜಾತಿ ಆದಾಯ ಪರಿಶೀಲನಾ ಸಮಿತಿ) ಸಿಂಧುತ್ವ ಪ್ರಮಾಣ ಪತ್ರ ಪಡೆದ ನಂತರ ನೇಮಕಾತಿ ಆದೇಶ ನೀಡಲಾಗುವುದು.

11) ನೇಮಕಾತಿ ಬಗ್ಗೆ ಅಂತಿಮ ತೀರ್ಮಾನವನ್ನು ನೇಮಕಾತಿ ಪ್ರಾಧಿಕಾರಿಯಾದ ಜಿಲ್ಲಾಧಿಕಾರಿಗಳು, ಬೆಳಗಾವಿ ಜಿಲ್ಲೆರವರು ಕಾಯ್ದಿರಿಸಿಕೊಂಡಿರುತ್ತಾರೆ.

**12) ಜಾತಿ/ಮೀಸಲಾತಿ ಪ್ರಮಾಣ ಪತ್ರಗಳು :**

ಮೀಸಲಾತಿ ಸೌಲಭ್ಯ ಅಪೇಕ್ಷಿಸುವ ಅಭ್ಯರ್ಥಿಗಳು ಈ ಕೆಳಕಂಡ ಮೂಲ ದಾಖಲೆಗಳನ್ನು ನಿಗಧಿತ ನಮೂನೆಯಲ್ಲಿ ಸಂಬಂಧಪಟ್ಟ ರೆವಿನ್ಯೂ ಪ್ರಾಧಿಕಾರದಿಂದ (ಸಂಬಂಧಪಟ್ಟ ತಹಶೀಲ್ದಾರರಿಂದ) ಪಡೆದು ಪರಿಶೀಲಿಸುವ ದಿನಾಂಕದಂದು ಹಾಜರುಪಡಿಸಬೇಕು ತಪ್ಪಿದ್ದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಿ ಅವರ ಅಭ್ಯರ್ಥಿತನವನ್ನು ಅರ್ಹತೆಯಡಿಯಲ್ಲಿ ಪರಿಗಣಿಸಲಾಗುವದು. ಪ.ಜಾ/ಪ.ಪಂ. ನಮೂನೆ-ಡಿಯಲ್ಲಿ ಪ್ರವರ್ಗ-1 ನಮೂನೆ-ಇ ಯಲ್ಲಿ ಪ್ರವರ್ಗ-2ಎ,2ಬಿ,3ಎ,3ಬಿ, ನಮೂನೆ ಎಫ್ ನಲ್ಲಿ ಸಂಬಂಧಪಟ್ಟ ತಹಶೀಲ್ದಾರರಿಂದ ಚಾಲ್ತಿಯಲ್ಲಿರುವ ಪ್ರಮಾಣ ಪತ್ರಗಳನ್ನು ಪಡೆದಿರಬೇಕು.

**13) ಯೋಜನಾ ನಿರಾಶ್ರಿತರಾದ ಕುಟುಂಬದ ಅಭ್ಯರ್ಥಿಗಳು :**

ಯೋಜನಾ ನಿರಾಶ್ರಿತರ ಕುಟುಂಬದ ಅಭ್ಯರ್ಥಿಗಳಿಗೆ ಮೀಸಲಿಡಲಾದ ಹುದ್ದೆಗಳನ್ನು ಕ್ಷೇಮು ಮಾಡುವ ಅಭ್ಯರ್ಥಿಗಳು ಸಂಬಂಧಿಸಿದ ತಹಶೀಲ್ದಾರರವರು ನೀಡಿದ ಪ್ರಮಾಣ ಪತ್ರಗಳನ್ನು ಪಡೆದಿರಬೇಕು. (ಅನುಬಂಧ-2)

**14) ಅಂಗವಿಕಲ ಮೀಸಲಾತಿ ಬಗ್ಗೆ :**

ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977 ರ ನಿಯಮ 9(1-ಎ) ರನ್ವಯ ರಾಜ್ಯ ಸಿವಿಲ್ ಸೇವೆಯಲ್ಲಿನ ಗ್ರೂಪ್ ಸಿ ಹುದ್ದೆಗಳ ನೇರ ನೇಮಕಾತಿಯಲ್ಲಿ ಅಂಗವಿಕಲರಿಗೆ ಶೇಕಡಾ 5% ರಷ್ಟು ಸಮತಳ ಮೀಸಲಾತಿ ಕಲ್ಪಿಸಿದೆ. ಸರ್ಕಾರದ ಅಧಿಸೂಚನೆ ಸಂ:ಡಿಪಿಎಆರ್-54/ಎಸ್ಆರ್ಆರ್:2012 ದಿನಾಂಕ:23-06-2012 ನೇದ್ದರಲ್ಲಿ (1) ಕುಷ್ಠರೋಗದಿಂದ ಗುಣಮುಖರಾದವರು. (Leprosy Cured) (2) ಶ್ರವಣದೋಷವುಳ್ಳವರು. (Hearing impaired) (3) ದೈಹಿಕ ಅಂಗವಿಕಲತೆಯುಳ್ಳವರು. (Locomotor disability) (4) ಮಾನಸಿಕ ಅಸ್ವಸ್ಥತೆಯಿಂದ ಗುಣಮುಖರಾದವರು (Mentally ill) ಗ್ರಾಮ ಲೆಕ್ಕಿಗರ ಹುದ್ದೆಗೆ ಪರಿಗಣಿಸಲು ಅವಕಾಶ ಕಲ್ಪಿಸಲಾಗಿದೆ.

ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ:ಸಿಆಸುಇ:115ಸೆನೆನಿ:2005 ದಿನಾಂಕ : 19-11-2005 ರಲ್ಲಿ ನಿಗದಿಪಡಿಸಿರುವ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಸಂಬಂಧಪಟ್ಟ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯು ನೀಡುವ ಪ್ರಮಾಣ ಪತ್ರವನ್ನು ಪಡೆದುಕೊಂಡಿರತಕ್ಕದ್ದು. ಬೇರೆ ಯಾವುದೇ ನಮೂನೆಗಳಲ್ಲಿ ಪಡೆಯಲಾಗಿರುವ ಪ್ರಮಾಣ ಪತ್ರಗಳನ್ನು ಪರಿಗಣಿಸಲು ಬರುವುದಿಲ್ಲ ಹಾಗೂ ಅಂಗವಿಕಲ ಗುರುತಿನ ಚೀಟಿಯನ್ನು ಅಂಗೀಕರಿಸಲಾಗುವುದಿಲ್ಲ.

-6-

**15) ಗ್ರಾಮೀಣ ಅಭ್ಯರ್ಥಿಗಳು :**

ಗ್ರಾಮೀಣ ಅಭ್ಯರ್ಥಿ ಎಂದರೆ ಒಂದು ಹುದ್ದೆಗಾಗಿ ನಿಯಮಿಸಲಾದ ಅರ್ಹತಾ ಪರೀಕ್ಷೆಯು ಎಸ್.ಎಸ್.ಎಲ್.ಸಿ. ಅಥವಾ ಉನ್ನತ ಪರೀಕ್ಷೆಯಾಗಿದ್ದಲ್ಲಿ 1 ನೇ ತರಗತಿಯಿಂದ 10 ನೇ ತರಗತಿಯವರೆಗೆ ವ್ಯಾಸಂಗದ ಪ್ರಮಾಣ ಪತ್ರವನ್ನು ಸಂಬಧಪಟ್ಟ ಪ್ರಾಧಿಕಾರಿಯಿಂದ ದೃಡೀಕೃತ ಗ್ರಾಮೀಣ ಪ್ರಮಾಣ ಪತ್ರವನ್ನು ಪಡೆದಿರಬೇಕು. ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ ವ್ಯಾಸಂಗ ಮಾಡಿ ಉತ್ತೀರ್ಣರಾಗಿರುವವರು ಈ ಮೀಸಲಾತಿಯನ್ನು ಪಡೆಯಲು ಅರ್ಹರು. ಗ್ರಾಮೀಣ ಅಭ್ಯರ್ಥಿಗೆಂದು ಮೀಸಲಿರಿಸಿದ ಹುದ್ದೆಗಳನ್ನು ಕ್ಲೇಮು ಮಾಡುವ ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳು ನಮೂನೆ-2 ರ ಪ್ರಮಾಣ ಪತ್ರವಲ್ಲದೇ ಮೇಲುಸ್ಥರಕ್ಕೆ ಸೇರಿಲ್ಲದಿರುವ ಬಗ್ಗೆ ನಮೂನೆ-1 ರಲ್ಲಿ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಸಂಬಂಧಪಟ್ಟ ತಹಶೀಲ್ದಾರರಿಂದ ಪಡೆದು ಅಂತೆಯೆ ಗ್ರಾಮೀಣ ಮೀಡಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, ಪ್ರವರ್ಗ-2ಎ,2ಬಿ,3ಎ,3-ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು ಕಡ್ಡಾಯವಾಗಿ ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರವನ್ನು ನಮೂನೆ-2 ರಲ್ಲಿ ನಿಗದಿತ ಪ್ರಾಧಿಕಾರಿಗಳಿಂದ ಪಡೆದು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಯವರಿಂದ ಮೇಲು ರುಜು ಮತ್ತು ಮೊಹರು ಮಾಡಿಸಿರಬೇಕು. (ಅನುಬಂಧ-1)

**16) ಕನ್ನಡ ಮಾಧ್ಯಮ ಅಭ್ಯರ್ಥಿಗಳು :**

ಸರ್ಕಾರದ ಅಧಿಸೂಚನೆ ಸಂಖ್ಯೆ:ಡಿಪಿಎಆರ್:71:ಎಸ್ಆರ್ಆರ್:2001 ದಿನಾಂಕ : 24-10-2002 ರಲ್ಲಿ ಹೊರಡಿಸಿರುವ ಕರ್ನಾಟಕ ಸರ್ಕಾರಿ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977 ರ ನಿಯಮ 9(1)(ಸಿ) ರನ್ವಯ ಅಭ್ಯರ್ಥಿಯು 1 ರಿಂದ 10 ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಪ್ರಮಾಣ ಪತ್ರಗಳನ್ನು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಯವರಿಂದ ಮೇಲುರುಜು ಮಾಡಿಸಿ ದೃಡೀಕೃತ ಪ್ರತಿಯನ್ನು ಮೂಲ ದಾಖಲಾತಿ ಪರಿಶೀಲನಾ ಸಮಯದಲ್ಲಿ ಸಲ್ಲಿಸಬೇಕು.(ಅನುಬಂಧ-3)

**17) ಅರ್ಹತಾ ಷರತ್ತುಗಳು :**

**ಅ)** ಭಾರತೀಯ ನಾಗರೀಕನಾಗಿರತಕ್ಕದ್ದು.

**ಆ)** ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತನಾಗಿರಬೇಕು. ಮತ್ತು ಅವರ ನೇಮಕಾತಿಯ ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟುಮಾಡುವ ಸಂಬವ ಇರುವ ಯಾವುದೇ ದೈಹಿಕ ನ್ಯೂನ್ಯತೆಯಿಂದ ಮುಕ್ತರಾಗಿರಬೇಕು.

**ಇ)** ದೈಹಿಕವಾಗಿ ಅನರ್ಹರಾಗಿದ್ದಾರೆಂಬುದಾಗಿ ವೈದ್ಯಕೀಯ ಮಂಡಳಿ ವರದಿಯ ಮೇಲೆ ಅನರ್ಹರೆಂಬುದಾಗಿ ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ಆಯ್ಕೆ ಪ್ರಾಧಿಕಾರ/ರಾಜ್ಯ ಸರ್ಕಾರ ಕಾಯ್ದಿರಿಸಿಕೊಂಡಿದೆ. ಮತ್ತು ಆಯ್ಕೆ ಪ್ರಾಧಿಕಾರ ಸರ್ಕಾರದ ವಿವೇಚನೆಯು ಯಾವುದೇ ವಿಧದಲ್ಲೂ ಈ ನಿಯಮಗಳ ಮೂಲಕ ಸೀಮಿತವಾಗಿರುವುದಿಲ್ಲ. ನಿಗದಿತ ಶೈಕ್ಷಣಿಕ ಅರ್ಹತೆ ಜೊತೆಗೆ ಈ ಮೇಲ್ಕಂಡ ಅರ್ಹತೆಗಳನ್ನು ಅಭ್ಯರ್ಥಿಗಳು ನೇಮಕಾತಿಗಾಗಿ ಅರ್ಜಿ ಸಲ್ಲಿಸಲು ಅರ್ಹತೆಯನ್ನು ಹೊಂದಿರಬೇಕು.

ಈ) ನಿಗಧಿತ ಶೈಕ್ಷಣಿಕ ಅರ್ಹತೆಯ ಜೊತೆಗೆ ಈ ಮೇಲ್ಕಂಡ ಅರ್ಹತೆಯನ್ನು ಹೊಂದಿ ವಯೋಮಿತಿಯೊಳಗಿರುವ ಅಭ್ಯರ್ಥಿಗಳು ನೇಮಕಾತಿಗಾಗಿ ಅರ್ಜಿ ಸಲ್ಲಿಸುವ ಅರ್ಹತೆಯನ್ನು ಹೊಂದಿರುತ್ತಾರೆ.

**18) ಪಿಂಚಣಿ ಸೌಲಭ್ಯ :**

ಸರ್ಕಾರದ ಆದೇಶ ಸಂಖ್ಯೆ:ಎಫ್‌ಡಿ(ಎಸ್‌ಪಿಎಲ್)04:ಪಿಇಟಿ:2005 ದಿನಾಂಕ:31-03-2006 ರಲ್ಲಿ ಸರ್ಕಾರದವರು ಈ ಹಿಂದೆ ಜಾರಿಯಲ್ಲಿದ್ದ ನಿವೃತ್ತಿ ಪಿಂಚಣಿ ಸೌಲಭ್ಯ ಯೋಜನೆಯ ಬದಲಾಗಿ ದಿನಾಂಕ:01-4-2006 ರಿಂದ ಹೊಸದಾಗಿ New defined Contributory Pension Scheme ಎಂಬ ಹೊಸ ಪಿಂಚಣಿ ಯೋಜನೆಯನ್ನು ಜಾರಿಗೆ ತರಲಾಗಿದ್ದು, ಈ ಹೊಸ ಪಿಂಚಣಿ ಯೋಜನೆಯು ಹೊಸ ಪಿಂಚಣಿ ಯೋಜನೆಗೆ ಬದ್ಧರಾಗಿರತಕ್ಕದ್ದು.

ಸರ್ಕಾರದ ಆದೇಶ ಕ್ರ:ಆಇ/34/ಪಿಇಎನ್/2018 ದಿನಾಂಕ : 23-06-2018 ರಲ್ಲಿ ವಿಧಿಸಿದ ಷರತ್ತುಗಳಿಗೆ ಬದ್ಧರಾಗಿರತಕ್ಕದ್ದು,

-7-

**19) ಈ ಕೆಳಕಂಡ ಮೂಲ ದಾಖಲೆಗಳನ್ನು ದಾಖಲಾತಿಗಳ ಪರಿಶೀಲನೆ ಸಮಯದಲ್ಲಿ ಹಾಜರುಪಡಿಸಬೇಕು.**

* ಹುದ್ದೆಗಳಿಗೆ ನಿಗದಿಪಡಿಸಲಾದ ವಿದ್ಯಾರ್ಹತೆಯ ಅಂಕಪಟ್ಟಿ/ಪ್ರಮಾಣ ಪತ್ರ ಮತ್ತು ಕಂಪ್ಯೂಟರ್ ಜ್ಞಾನದ ಬಗ್ಗೆ ದಾಖಲೆ.
* ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್.ಎಸ್.ಎಲ್.ಸಿ. ಅಥವಾ ವರ್ಗಾವಣೆ ಪತ್ರ/ಜನ್ಮ ದಿನಾಂಕವನ್ನು ತೋರಿಸುವ ಶೈಕ್ಷಣಿಕ ಸಂಚಿತ ಉದ್ಧೃತ ಭಾಗ.
* ಸೈನಿಕ ಸೇವೆಯಿಂದ ಬಿಡುಡೆಯಾದ/ಮುಕ್ತಿ ಹೊಂದಿದ ಬಗೆಗಿನ ಪ್ರಮಾಣ ಪತ್ರ (ಮಾಜಿ ಸೈನಿಕ ಮೀಲಸಾತಿ ಕೋರಿದ್ದಲ್ಲಿ)
* ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ,ಪ್ರವರ್ಗ-1,ಪ್ರವರ್ಗ-2ಎ, ಪ್ರವರ್ಗ-2ಬಿ,ಪ್ರವರ್ಗ-3ಎ, ಪ್ರವರ್ಗ-3ಬಿ ಪ್ರಮಾಣ ಪತ್ರಗಳು (ಮೀಸಲಾತಿ ಕೋರಿದ್ದಲ್ಲಿ)
* ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರ ನಮೂನೆ-1 ಮತ್ತು 2 ರಲ್ಲಿ(ಮೀಸಲಾತಿ ಕೋರಿದ್ದಲ್ಲಿ)
* ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)
* ಅಂಗವಿಕಲ ಮೀಸಲಾತಿ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)
* ಯೋಜನೆಗಳಿಂದ ನಿರಾಶ್ರಿತರಾದ ಬಗ್ಗೆ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)
* ಸೇವೆಯಲ್ಲಿರುವ ಅಭ್ಯರ್ಥಿಗಳು ಅವರ ನೇಮಕಾತಿ ಪ್ರಾಧಿಕಾರದಿಂದ ನಿರಾಕ್ಷೇಪಣಾ ಪತ್ರ (NO OBJECTION CERTIFICATE) ವನ್ನು ಪಡೆದು ಮೂಲ ದಾಖಲಾತಿ ಪರಿಶೀಲನಾ ಸಮಯದಲ್ಲಿ ಸಲ್ಲಿಸಬೇಕು.
* ಸೇವೆಯಲ್ಲಿರುವ ಅಭ್ಯರ್ಥಿಗಳು ಆಯ್ಕೆಯಾದಲ್ಲಿ ಕ.ನಾ.ಸೇ.ನಿಯಮಗಳು 1958 ರ ನಿಯಮ 252(ಬಿ) ರನ್ವಯ ಸೇವೆಯಿಂದ ಬಿಡುಗಡೆ ಹೊಂದಿದಲ್ಲಿ ಮಾತ್ರ ಹಿಂದಿನ ಸೇವಾ ಅವಧಿಯನ್ನು ಪರಿಗಣಿಸಲು ಅರ್ಹರಾಗಿರುತ್ತಾರೆ.
* ವಿಧವೆಯಾಗಿದ್ದಲ್ಲಿ ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರ.

**20) ದುರ್ನಡತೆ :**

ಒಬ್ಬ ಅಭ್ಯರ್ಥಿಯು ನಕಲಿ ವ್ಯಕ್ತಿಯಾಗಿರುವನೆಂದು ಅಥವಾ ಖೊಟಾ ದಸ್ತಾವೇಜ ಅಥವಾ ತಿದ್ದುಪಡಿ ದಸ್ತಾವೇಜಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪಿ ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವನೆಂದು ಅಥವಾ ಅವರ ನೇಮಕಾತಿಯ ಸಂದರ್ಬದಲ್ಲಿ ಯಾವುದೇ ಇತರೆ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವನೆಂದು ಕಂಡು ಬಂದಲ್ಲಿ ಅವನ/ಅವಳು ಸ್ವತಃ ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೆ ಹುದ್ದೆಯ ಆಯಕೆಯಿಂದ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು.

**21) ಆಯ್ಕೆ ವಿಧಾನ :**

ಕರ್ನಾಟಕ ಜನರಲ್ ಸರ್ವಿಸಸ್ (Revenue Subordinate Branch) (cader & Recruitment) (ತಿದ್ದುಪಡಿ) ನಿಯಮಗಳು 2008 ಮತ್ತು 2009 ರನ್ವಯ ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977 ರ ಪ್ರಕಾರ ಅಭ್ಯರ್ಥಿಯನ್ನು ಅವರು ಪಿ.ಯು.ಸಿ. ಅಥವಾ ಸಿ.ಬಿ.ಎಸ್.ಸಿ. ಅಥವಾ ಐ.ಸಿ.ಎಸ್.ಸಿ ನಡೆಸುವ 12 ನೇ ತರಗತಿ ಪರೀಕ್ಷೆಯಲ್ಲಿ ಪಡೆದ ಅಂಕ (on merit) ಆಧಾರದ ಮೇಲೆ ಆಯಾಯ ಮೀಸಲಾತಿ ಪ್ರವರ್ಗಕ್ಕೆ ಸಂಬಂಧಿಸಿದಂತೆ ಆಯ್ಕೆ ಮಾಡಲಾಗುವುದು.

**22) ಇತರೆ ಸೂಚನೆಗಳು :**

1) ಸಂದರ್ಭನುಸಾರ ತುಂಬಬೇಕಾದ ಹುದ್ದೆಗಳ ಸಂಖ್ಯೆಯನ್ನು ಪರಿಷ್ಕರಿಸುವ ಅಧಿಕಾರವನ್ನು ಅಧ್ಯಕ್ಷರು, ಆಯ್ಕೆ ಮತ್ತು ನೇರ ನೇಮಕಾತಿ ಪ್ರಾಧಿಕಾರ ಹಾಗೂ ಜಿಲ್ಲಾಧಿಕಾರಿಗಳು ಬೆಳಗಾವಿಯವರು ಹೊಂದಿರುವರು.
2) ಅರ್ಜಿಯಲ್ಲಿ ತಪ್ಪು/ಸುಳ್ಳು ಮಾಹಿತಿ ನೀಡಿ ಉದ್ಯೋಗ ಪಡೆಯುವ ಅಭ್ಯರ್ಥಿಗಳ ನೇಮಕಾತಿಯನ್ನು ವಜಾಗೊಳಿಸುವುದಲ್ಲದೇ ಕ್ರಿಮಿನಲ್ ಮೊಕದ್ದಮೆ ದಾಖಲಿಸುವುದು.

-8-

3) ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕವು ಸಾರ್ವತ್ರಿಕ ರಜಾ ದಿನವಾಗಿ ಘೋಷಿಸಲ್ಪಟ್ಟರೆ ಆ ದಿನಾಂಕದ ಮಾರನೇ ದಿನವು ಅರ್ಜಿಗಳನ್ನು ಸ್ವೀಕರಿಸಲು ಕೊನೆಯ ದಿನಾಂಕವಾಗುವುದು.

4) ಅರ್ಜಿಯಲ್ಲಿ ನಿಡುವ ವಿಳಾಸವೇ ಅಂತಿಮವಾಗಿದ್ದು ಎಲ್ಲಾ ಪತ್ರ ವ್ಯವಹಾರಗಳನ್ನು ಅದೇ ವಿಳಾಸಕ್ಕೆ ಕಳುಹಿಸಿ ಕೊಡಲಾಗುವದು. ನಂತರದಲ್ಲಿ ವಿಳಾಸ ಬದಲಾವಣೆ ಬಗ್ಗೆ ಯಾವುದೇ ಪತ್ರ ವ್ಯವಹಾರಗಳನ್ನು ಪರಿಗಣಿಸುವುದಿಲ್ಲ.

5) ಅರ್ಹ ಅಭ್ಯರ್ಥಿಗಳು ಅರ್ಜಿಯನ್ನು ಭರ್ತಿ ಮಾಡುವ ಮುನ್ನ ವೆಬ್ ಸೈಟನಲ್ಲಿ ತಿಳಿಸಿರುವ ಸೂಚನೆಗಳನ್ನು ಪಾಲಿಸುವುದು.

6) ಅಭ್ಯರ್ಥಿಗಳು ಕ್ಲೇಮು ಮಾಡಿದ ಎಲ್ಲಾ ಮೂಲ ದಾಖಲಾತಿಗಳನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ **ದಿನಾಂಕ : 31 /08/2018 ಕ್ಕಿಂತ ಒಳಗಾಗಿ ಕಡ್ಡಾಯವಾಗಿ ಪಡೆದಿರಬೇಕು.**

7) ಹೆಚ್ಚಿನ ಮಾಹಿತಿಗಾಗಿ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಈ ಕೆಳಕಂಡಂತೆ ಸಂಪರ್ಕಿಸತಕ್ಕದ್ದು.

1) ಇ-ಮೇಲ್ : kgsc.bgm@gmail.com

2) ದೂರವಾಣಿ :0831-2407272

3) ಫಾಕ್ಸ್ ನಂ. : 0831 -2407272

**(ಎಸ್.ಜಿಯಾವುಲ್ಲಾ)**
**ಅಧ್ಯಕ್ಷರು,**
**ಆಯ್ಕೆ ಮತ್ತು ನೇರ ನೇಮಕಾತಿ ಪ್ರಾಧಿಕಾರ ಹಾಗೂ**
**ಜಿಲ್ಲಾಧಿಕಾರಿಗಳು ಬೆಳಗಾವಿ ಜಿಲ್ಲೆ ಬೆಳಗಾವಿ**

**ಪ್ರತಿಯನ್ನು :**

1) ಸಂಕಲನಕಾರರು, ಸರಕಾರಿ ವಿಭಾಗೀಯ ಮುದ್ರಣಾಲಯ, ಧಾರವಾಡ ಇವರಿಗೆ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ. ಈ ಅಧಿಸೂಚನೆಯನ್ನು ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಲು ಹಾಗೂ 50 ಪ್ರತಿಗಳನ್ನು ಜಿಲ್ಲಾಧಿಕಾರಿಗಳು, ಬೆಳಗಾವಿ ಜಿಲ್ಲೆ, ಬೆಳಗಾವಿ ಇವರಿಗೆ ಒದಗಿಸಲು ಕೋರಿದೆ.
2) ಸರ್ಕಾರದ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ಬೆಂಗಳೂರು ಇವರ ಅವಗಾಹನೆಗೆ ಸಲ್ಲಿಸಿದೆ.
3) ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ, ಸೇವೆಗಳು, ಬಹುಮಹಡಿಗಳ ಕಟ್ಟಡ, ಬೆಂಗಳೂರು ಇವರ ಅವಗಾಹನೆಗೆ ಸಲ್ಲಿಸಿದೆ.
4) ಮಹಾಲೇಖಪಾಲರು ( ಎ ಮತ್ತು ಇ ) ಕರ್ನಾಟಕ, ಬೆಂಗಳೂರು ಇವರಿಗೆ ಸಲ್ಲಿಸಿದೆ.
5) ಮಾನ್ಯ ಪ್ರಾದೇಶಿಕ ಆಯುಕ್ತರು, ಬೆಳಗಾವಿ ವಿಭಾಗ ಬೆಳಗಾವಿ ರವರ ಅವಗಾಹನೆಗೆ ಸಲ್ಲಿಸಿದೆ.
6) ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳವರಿಗೆ,
7) ಪ್ರಾಂಶುಪಾಲರು, ಜಿಲ್ಲಾ ತರಬೇತಿ ಸಂಸ್ಥೆ, ಬೆಳಗಾವಿ ಇವರಿಗೆ,
8) ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಗಳು, ಬೆಳಗಾವಿ. ಇವರಗೆ,
9) ಜಿಲ್ಲಾ ಅಧಿಕಾರಿ, ಹಿಂದುಳಿದ ವರ್ಗಗಳು ಮತ್ತು ಅಲ್ಪಸಂಖ್ಯಾತರ ಇಲಾಖೆ, ಬೆಳಗಾವಿ ಇವರಿಗೆ,
10) ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ದಿ ಇಲಾಖೆ, ಬೆಳಗಾವಿ. ಇವರಿಗೆ,

11) ಉಪವಿಭಾಗಾಧಿಕಾರಿಗಳು, ಬೆಳಗಾವಿ/ಬೈಲಹೊಂಗಲ/ಚಿಕ್ಕೋಡಿ ಇವರಿಗೆ ಕಳುಹಿಸುತ್ತಾ, ತಮ್ಮ ಕಛೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲು ತಿಳಿಸಿದೆ.
12) ಜಿಲ್ಲೆಯ ಎಲ್ಲಾ ತಹಸೀಲ್ದಾರ್,ರವರಿಗೆ ಕಳುಹಿಸುತ್ತಾ ತಮ್ಮ ಕಛೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲು ತಿಳಿಸಿದೆ.
13) ಬ್ರ್ಯಾಂಚ ಮ್ಯಾನೇಜರ, ಕಾರ್ಪೋರೇಷನ ಬ್ಯಾಂಕ, ಕೆಎಲ್ಎಸ್ ಗೋಗಟೆ ಕಾಲೇಜ ಆಫ್ ಕಾಮರ್ಸ ಟಿಳಕವಾಡಿ ಬೆಳಗಾವಿ ಇವರಿಗೆ ಸೂಕ್ತ ಕ್ರಮ ಕುರಿತು ಕಳುಹಿಸಿದೆ.
14) ಕಾರ್ಯಾಲಯದ ಸೂಚನಾ ಫಲಕಕ್ಕೆ.
15) ಹೆಚ್ಚುವರಿ ಪ್ರತಿಗಳು ಶಾಖಾ ಕಡತಕ್ಕೆ.

**ಕಾರ್ಯದರ್ಶಿಗಳು**
**ಆಯ್ಕೆ ಮತ್ತು ನೇರ ನೇಮಕಾತಿ ಪ್ರಾಧಿಕಾರ ಹಾಗೂ**
**ಅಪರ ಜಿಲ್ಲಾಧಿಕಾರಿಗಳು ಬೆಳಗಾವಿ ಜಿಲ್ಲೆ ಬೆಳಗಾವಿ**